# ಕರ್ನಾಟಕ ಸರ್ಕಾರ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 24
ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 11.08.2025
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಕಳೆದ ನಾಲ್ಕು ವರ್ಷಗಳ ಹಿಂದೆ ಆಮ್ಲಜನಕ ಸಿಗದೆ ಅಸುನೀಗಿದ ಕುಟುಂಬಗಳಿಗೆ ಸರ್ಕಾರ ನೀಡಿದ ಪರಿಹಾರ ಕ್ರಮಗಳೇನು; | ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದ 2021 ರ ಮೇ-2 ಮತ್ತು ಮೇ-3 ರಂದು ಸಂಭವಿಸಿರಬಹುದಾದ ಘಟನೆಯಿಂದಾಗಿ ಮೃತಪಟ್ಟ 24 ವ್ಯಕ್ತಿಗಳ ಕಾನೂನುಬದ್ಧ ವಾರಸುದಾರರಿಗೆ ಪ್ರಥಮವಾಗಿ ಮಾನ್ಯ ಮುಖ್ಯಮಂತ್ರಿಯವರ ಪರಿಹಾರ ನಿಧಿಯಿಂದ ತಲಾ ರೂ.2.00 ಲಕ್ಷ (ಎರಡು ಲಕ್ಷ) ಗಳಂತೆ ಒಟ್ಟು ರೂ.48.00 ಲಕ್ಷಗಳ ಪರಿಹಾರವನ್ನು ಪಾವತಿಸಲಾಗಿರುತ್ತದೆ. ನಂತರ ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ದಾಖಲಾಗಿರುವ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿ ಸಂಖ್ಯೆ:6435/2020ರ ದಿನಾಂಕ:06.07.2021ರ ತೀರ್ಪಿನಂತೆ ಸದರಿ 24 ವ್ಯಕ್ತಿಗಳ ಪೈಕಿ 13 ಮೃತ ವ್ಯಕ್ತಿಗಳ ಕಾನೂನುಬದ್ಧ ವಾರಸುದಾರರಿಗೆ ತಲಾ ರೂ.3.00 ಲಕ್ಷಗಳಂತೆ ಒಟು ರೂ.39.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ ಇವರಿಂದ ಬಿಡುಗಡೆ ಮಾಡಲಾಗಿರುತ್ತದೆ.<br><br>ಒಟ್ಟಾರೆಯಾಗಿ ಮೃತಪಟ್ಟ 24 ವ್ಯಕಿಗಳ ಪೈಕಿ 13 ಮೃತ ವ್ಯಕ್ತಿಗಳ ಕಾನೂನುಬದ್ಧ ವಾರಸುದಾರರಿಗೆ ತಲಾ ರೂ.5.00 ಲಕ್ಷ ಮತ್ತು 11 ವ್ಯಕ್ತಿಗಳ ಮೃತ ವಾರಸುದಾರರಿಗೆ ತಲಾ 2.00 ಲಕ್ಷಗಳಂತೆ ಪರಿಹಾರವನ್ನು ಪಾವತಿಸಲಾಗಿರುತ್ತದೆ.<br><br>ಭಾರತ ಸರ್ಕಾರದ ಗೃಹ ಮಂತ್ರಾಲಯದ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ ಮಾನದಂಡಗಳ ಪ್ರಕಾರ, ಕೋವಿಡ್-19 ಸಂಬಂಧಿತ ಎಂದು ಪ್ರಮಾಣೀಕರಿಸಲ್ಪಟ್ಟ ಮರಣಗಳಿಗೆ ಸಂಬಂಧಪಟ್ಟಂತೆ ಮಾತ್ರ ರಾಜ್ಯ ವಿಪತ್ತು ಪರಿಹಾರ ನಿಧಿ ರಡಿಯಲ್ಲಿ ಮೃತರ ವಾರಸುದಾರರಿಗೆ ರೂ.50,000/- ಗಳಂತೆ ಪರಿಹಾರವನ್ನು ನೀಡಲಾಗಿರುತ್ತದೆ. |
| (ಆ) | ಎಷ್ಟು ಕುಟುಂಬಗಳಿಗೆ ಆರ್ಥಿಕ ಪರಿಹಾರವನ್ನು ಒದಗಿಸಲಾಗಿದೆ; (ವಿವರ ಒದಗಿಸುವುದು) | |

| | | |
|---|---|---|
| ಇ) | ಈ ಘಟನೆಯಲ್ಲಿ ಅನುನೀಗಿದ ಕುಟುಂಬ ಸದಸ್ಯರಿಗೆ ಈವರೆಗೂ ಉದ್ಯೋಗ ಒದಗಿಸದಿರಲು ಕಾರಣಗಳೇನು? (ಮಾಹಿತಿ ನೀಡುವುದು) | ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಕೋವಿಡ್ ಸಂದರ್ಭದಲ್ಲಿ ಆಮ್ಲಜನಕ ಕೊರತೆಯಿಂದ ಮೃತಪಟ್ಟವರ ಸದಸ್ಯರೊಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವ ಸಂಬಂಧ ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಮತ್ತು ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:16.07.2025 ರಂದು ನಡೆದಿರುವ ಸಭೆಯಲ್ಲಿ, ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಲಭ್ಯವಿರುವ ಹುದ್ದೆಗಳಿಗೆ ಮೃತಪಟ್ಟವರ ಅವಲಂಬಿತರಿಗೆ ಅನುಕಂಪ ಆಧಾರದ ಉದ್ಯೋಗ ನೀಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ದೇಶಕರು, ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರುಗಳಿಗೆ ಸೂಚಿಸಲಾಗಿರುತ್ತದೆ. ಅದರನ್ವಯ, ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ಸಚಿವಾಲಯದಲ್ಲಿ ಸ್ವೀಕೃತವಾಗುವ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮ ವಹಿಸಲಾಗುತ್ತದೆ. |

**ಕಂಇ 351 ಟಿಎನ್‌ಆರ್ 2025**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು